**O. S. No:113/2020**
**DW:1**

(ಇಂದು ದಿನಾಂಕಃ **23-04-2025** ರಂದು ಸಾಕ್ಷಿಯನ್ನು ತೆರೆದ ನ್ಯಾಯಾಲಯಕ್ಕೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.)

**ಮುಖ್ಯ ವಿಚಾರಣೆಃ ಶ್ರೀ ವಿ ಟಿ ಕೆ ವಕೀಲರಿಂದ:**

ನನ್ನ ಮುಖ್ಯ ವಿಚಾರಣೆ ಸಲುವಾಗಿ ಪ್ರಮಾಣ ಪತ್ರ ಸಲ್ಲಿಸಿದ್ದು ಅದರಲ್ಲಿರುವ ವಿಷಯಗಳು ನಿಜ ಇರುತ್ತವೆ. ಸಾಕ್ಷಿಯು ನಿಡಿ-1 ರ ಮೇಲಿರುವ ತಮ್ಮ ಸಹಿ ನೋಡಿ ಗುರುತಿಸಿದ್ದು, **ನಿಡಿ-1(ಎ)** ಎಂದು ಗುರುತಿಸಲಾಯಿತು. ಸಾಕ್ಷಿಯು ಸದರಿ ದಾಖಲೆಯಲ್ಲಿರುವ ಸಾಕ್ಷಿದಾರರ ಸಹಿಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು **ನಿಡಿ-1(ಬಿ)** ಯಿಂದ **ನಿಡಿ-1(ಡಿ)** ಎಂದು ಗುರುತಿಸಲಾಯಿತು. ಸಾಕ್ಷಿಯು ನಿಡಿ-4 ರ ಮೇಲಿರುವ ತಮ್ಮ ಸಹಿ ನೋಡಿ ಗುರುತಿಸಿದ್ದು, **ನಿಡಿ-4(ಎ)** ಎಂದು ಗುರುತಿಸಲಾಯಿತು. ಸಾಕ್ಷಿಯು ಸದರಿ ದಾಖಲೆಯಲ್ಲಿರುವ ಸಾಕ್ಷಿದಾರನ ಸಹಿಯನ್ನು ನೋಡಿ ಗುರುತಿಸಿದ್ದು, ಅವುಗಳನ್ನು **ನಿಡಿ-4(ಬಿ)** ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಶ್ರೀ ಕೆ ಎನ್ ಕೆ ವಕೀಲರಿಂದಃ**

ನಾನು ದಾವಾ ಜಮೀನುಗಳ ಉತಾರಗಳನ್ನು ನೋಡಿರುತ್ತೇನೆ. ಸದರಿ ಜಮೀನುಗಳ ಸರ್ವೇ ನಂಬರ ಹೇಳಲಾಗುವುದಿಲ್ಲ. ವಾದಿಯ ತಂದೆಗೆ ದಾವಾ ಜಮೀನುಗಳು ಯಾವ ರೀತಿ ಬಂದಿರುತ್ತವೆ ಎಂದು ನನಗೆ ಗೊತ್ತಿಲ್ಲ. ನನ್ನನ್ನು 2 ನೇ ಪ್ರತಿವಾದಿ ಸಾಕ್ಷಿ ನುಡಿಯಲು ಕರೆದುಕೊಂಡು ಬಂದಿರುತ್ತಾರೆ. ನನ್ನ ಹಾಗೂ 2 ನೇ ಪ್ರತಿವಾದಿಯ ನಡುವೆ ಉತ್ತಮ ಬಾಂಧವ್ಯವಿರುತ್ತದೆ. ನಿಡಿ-1 ಮತ್ತು 4 ಗಳನ್ನು 1 ರಿಂದ 4 ನೇ ಪ್ರತಿವಾದಿಯರು ಸೇರಿ ಖೊಟ್ಟಿಯಾಗಿ ಸೃಷ್ಟಿಸಿದ ದಾಖಲೆಗಳಾಗಿರುತ್ತವೆ ಎಂದರೆ ಸರಿಯಲ್ಲ. ನನಗೆ ವಾದಿಯ ಪರಿಚಯವಿದೆ. ಸದರಿಯವರನ್ನು ಬಾಗಲಕೋಟೆಯ ಶಿರೂರು ಗ್ರಾಮದ ವ್ಯಕ್ತಿಗೆ ವಿವಾಹ ಮಾಡಿ ಕೊಡಲಾಗಿದೆ. ವಾದಿಗೆ ತೊಂದರೆ ಕೊಡಲು ದಾಖಲೆಗಳನ್ನು ಸೃಷ್ಟಿ ಮಾಡಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ವಾದಿಯ ಆಸ್ತಿಯನ್ನು ಎತ್ತಿಹಾಕುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಶ್ರೀ ಆರ್ ಎಂ ಆರ್ ವಕೀಲರಿಂದಃ**

ಪಾಟೀ ಸವಾಲಿಗೆ ಸಮಯ ಕೋರಿದ್ದು ಸಮಯ ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

**ಓ. ಹೇ. ಕೇ. ಸರಿ. ಇದೆ.**

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ**

**ನವಲಗುಂದ.**

**O. S. No:113/2020**
**DW:1**